**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು**
**ಸಿ.ಸಿ.ನಂ. 29: 2023**

**ದಿನಾಂಕ 27.02.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | | | |
|---|---|---|---|
| ಸಾಕ್ಷಿಯ ಹೆಸರು | ಃ | ರಂಜಿತ್ | ಚಾಸಾ-2, ಪ್ರಾಸಾ-2 |
| ತಂದೆಯ ಹೆಸರು | ಃ | ಮಹೇಶ್ವರಪ್ಪ | |
| ವಯಸ್ಸು | ಃ | 30 ವರ್ಷ | |
| ಉದ್ಯೋಗ | ಃ | ಅಡಿಗೆ ಕೆಲಸ | |
| ವಾಸ | ಃ | ನಾಗಗೊಂಡನಹಳ್ಳಿ | |

**ಮುಖ್ಯ ವಿಚಾರಣೆಃ ಃ-**

ಚಾಸಾ-1, 3, 4 ರವರ ಪರಿಚಯ ಇಲ್ಲಾ. ಆರೋಪಿತರ ಪರಿಚಯ ಇಲ್ಲಾ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಸಾಕ್ಷಿಯು ಪೋಲಿಸ್ ನೋಟಿಸು ಮತ್ತು ಮಹಜರ್ ನಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಸದರಿ ನೋಟಿಸನ್ನು ನಿಪಿ-2 ಎಂದು ಹಾಗೂ ಮಹಜರನ್ನು ನಿಪಿ-3 ಎಂದು, ಸಾಕ್ಷಿ ಸಹಿಗಳನ್ನು ನಿಪಿ-2(ಎ) ಮತ್ತು 3(ಎ) ಎಂದು ಗುರುತಿಸಲಾಯಿತು. ಸದರಿ ಸಹಿಗಳನ್ನು ಎಷ್ಟು ವರ್ಷದ ಹಿಂದೆ ಎಲ್ಲಿ ಯಾವ ವಿಚಾರಕ್ಕೆ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಾನು ರಸ್ತೆಯಲ್ಲಿ ಹೋಗುವಾಗ ಪೋಲಿಸರು ಕರೆಸಿ ನನ್ನ ಸಹಿ ಪಡೆದುಕೊಂಡಿರುತ್ತಾರೆ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನ್ಯಾಯಾಲಯದ ಮುಂದಿರುವ ವಸ್ತುಗಳನ್ನು ನೋಡಿದರೆ ಗುರುತಿಸಲಾಗುವುದಿಲ್ಲ.

ಸಾಕ್ಷಿಗೆ ನ್ಯಾಯಾಲಯದ ಮುಂದಿರುವ ಮುಮಾ-1 ಮತ್ತು 2 ರ ಮೇಲೆ ಅಂಟಿಸಿರುವ ಒಂದು ಚೀಟಿಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿ ಸಹಿಯನ್ನು ಮುಮಾ-1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನೂ ಸಹ ಆ ಸಮಯದಲ್ಲಿ ಪಡೆದಿರುತ್ತಾರೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲಾ. ಸಾಕ್ಷಿ ಎರಡು ಫೋಟೋಗಳಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿದ್ದು ಸದರಿ ಫೋಟೋಗಳನ್ನು ನಿಪಿ-4 ಮತ್ತು 5 ಎಂದು ಗುರುತಿಸಲಾಯಿತು. ಸದರಿ ಫೋಟೋಗಳನ್ನು ಯಾವ ವಿಚಾರಕ್ಕೆ ತೆಗೆಸಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸ ಸ ಅ ರವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**<u>ಪಾಟೀಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ-</u>**

ದಿಃ 28.10.2022 ರಂದು ಆರೋಪಿ ಮತ್ತು ಚಾಸಾ-1 ರವರ ಮಧ್ಯೆ ಗಲಾಟೆಯಾಗಿದ್ದ ವಿಚಾರವಾಗಿ ಪೋಲಿಸರು ಮಹಜರ್ ಮಾಡಲು ಬಂದು ಪಂಚರಾಗಿ ಸಹಕರಿಸುವಂತೆ ನನಗೆ ಮತ್ತು ಚಾಸಾ-3 ರವರಿಗೆ ನೋಟಸು ನೀಡಿ ಕೋರಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾವಿಬ್ಬರೂ ಒಪ್ಪಿಕೊಂಡ ಮೇರೆಗೆ ಪೋಲಿಸರು ಬೆಳಗ್ಗೆ 11.00 ರಿಂದ 11.30 ರವರೆಗೆ ಚಾಸಾ-4 ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಮಹಜರ್ ಮಾಡಿ ಆರೋಪಿತರು ಹಲ್ಲೆ ಮಾಡಲು ಉಪಯೋಗಿಸಿದ ಮುಮಾ-1 ಮತ್ತು 2 ನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-4 ಮತ್ತು 5 ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ತಿಳಿದಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಎ ಒ,

Sd/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.

Case called. Petitioner is present and examined as PW-1. Ex.P.1 to 6 got marked. Respondent absent. Hence cross of PW-1 taken as nil. Heard arguments. For orders. Call on 07.06.2023.

I Addl. Civil Judge & JMFC.,
Kadur